

ಶ್ರೀ ನರೇಂದ್ರ ಮೋದಿ ಸನ್ಮಾನ್ಯ ಪ್ರಧಾನಮಂತ್ರಿಗಳು

# ಕರ್ನಾಟಕ ಸರ್ಕಾರದಿಂದ ₹1610 ಕೋಟಿ ನೆರವು ಘೋಷಣೆ

ಕರ್ನಾಟಕ ಸರ್ಕಾರ

## ಕೋವಿಡ್ 19 ಲಾಕ್ ಡೌನ್ ಪರಿಣಾಮವಾಗಿ ತೊಂದರೆಗೆ ಸಿಲುಕಿರುವ ಕ್ಷೌರಿಕರು, ಅಗಸರು, ಆಟೋ/ಟ್ಯಾಕ್ಸಿ ಚಾಲಕರು, ಕಟ್ಟಡ ಕಾರ್ಮಿಕರು ಹಾಗೂ ಇತರರಿಗೆ ನೆರವು

11687 ಹೆಕ್ಟೇರ್ ವಿಸ್ತೀರ್ಣದಲ್ಲಿ ಹೂವುಗಳನ್ನು ಬೆಳೆದಿರುವ ರೈತರಿಗೆ ಹೆಕ್ಟೇರ್‌ಗೆ ಗರಿಷ್ಠ ₹25,000/- ಪರಿಹಾರ ಘೋಷಣೆ

60,000 ಅಗಸರ ವೃತ್ತಿಯಲ್ಲಿ ಇರುವ ಜನರಿಗೆ ಹಾಗೂ 230000 ಕ್ಷೌರಿಕ ವೃತ್ತಿಯಲ್ಲಿ ಇರುವ ಜನರಿಗೆ ₹5,000/- ಒಂದು ಬಾರಿ ಪರಿಹಾರ.

7,75,000 ಆಟೋ ಚಾಲಕರು ಹಾಗೂ ಟ್ಯಾಕ್ಸಿ ಚಾಲಕರಿಗೆ ಒಂದು ಬಾರಿ ಪರಿಹಾರವಾಗಿ ₹5000/- ನೀಡಲಾಗಿದೆ.

ಅತಿಸಣ್ಣ, ಸಣ್ಣ ಹಾಗೂ ಮಧ್ಯಮ ಉದ್ದಿಮೆಗಳ ಮಾಸಿಕ ವಿದ್ಯುಚ್ಛಕ್ತಿ ಬಿಲ್ ಮೊತ್ತದ ನಿಗದಿತ ದರವನ್ನು ಎರಡು ತಿಂಗಳ ಅವಧಿಗೆ ಪೂರ್ತಿಯಾಗಿ ಮನ್ನಾ ಮಾಡಲಾಗುವುದು.

ಬೃಹತ್ ಕೈಗಾರಿಕೆಗಳಿಗೆ ವಿದ್ಯುಚ್ಛಕ್ತಿ ಮೊತ್ತದ ನಿಗದಿತ ದರದ ಪಾವತಿಯನ್ನು ಎರಡು ತಿಂಗಳ ಅವಧಿಗೆ ಯಾವುದೇ ಬಡ್ಡಿ ಅಥವಾ ದಂಡ ಇಲ್ಲದೇ ಬಡ್ಡಿ ರಹಿತವಾಗಿ ಮುಂದೂಡಲಾಗುವುದು.

ಎಲ್ಲ ಪ್ರವರ್ಗದ ಗ್ರಾಹಕರಿಗೆ ವಿದ್ಯುಚ್ಛಕ್ತಿ ಬಿಲ್ ಮೊತ್ತವನ್ನು ಪಾವತಿಸಲು ಪರಿಹಾರಗಳು:

- ನಿಗದಿತ ಸಮಯದೊಳಗೆ ವಿದ್ಯುತ್ ಬಿಲ್ಲಿನ ಮೊತ್ತವನ್ನು ಪಾವತಿಸುವ ಗ್ರಾಹಕರಿಗೆ ಪ್ರೋತ್ಸಾಹ ರಿಯಾಯಿತಿಯನ್ನು ನೀಡಲಾಗುವುದು.
- ಕಂದಾಯ ಬಾಕಿ ಮೊತ್ತವನ್ನು ಕಂತುಗಳಲ್ಲಿ/ಭಾಗವಾಗಿ ಪಾವತಿಸಲು ಅವಕಾಶ ಕಲ್ಪಿಸಲಾಗುವುದು.
- ವಿಳಂಬ ಪಾವತಿಗಾಗಿ ವಿದ್ಯುತ್ ಬಿಲ್ಲಿನ ಮೊತ್ತದ ಮೇಲೆ ವಿಧಿಸುವ ಬಡ್ಡಿಯನ್ನು ಕಡಿಮೆ ಮಾಡಲಾಗುವುದು.
- ಕಂದಾಯ ಬಾಕಿ ಮೊತ್ತವನ್ನು ಪಾವತಿಸದಿರುವ ಗ್ರಾಹಕರಿಗೆ 30.06.2020 ರವರೆಗೆ ವಿದ್ಯುತ್ ಸಂಪರ್ಕ ಕಡಿತಗೊಳಿಸದೇ ಇರುವುದು.

ನೇಕಾರರಿಗೆ ನೆರವು ನೀಡಲು ಸರ್ಕಾರ ₹109 ಕೋಟಿ ವೆಚ್ಚದ "ನೇಕಾರರ ಸಾಲ ಮನ್ನಾ ಯೋಜನೆ"ಯಡಿಯಲ್ಲಿ 2019-20ನೇ ಸಾಲಿನಲ್ಲಿ ₹29 ಕೋಟಿ ಬಿಡುಗಡೆ ಮಾಡಿದ್ದು ಉಳಿದಿರುವ ₹80 ಕೋಟಿ ಕೂಡಲೇ ಬಿಡುಗಡೆ ಮಾಡಿ ನೇಕಾರರಿಗೆ ಹೊಸ ಸಾಲಗಳನ್ನು ದೊರಕಿಸಿಕೊಡಲು ಅನುವು ಮಾಡಿಕೊಡಲಿದೆ.
01-01-2019 ರಿಂದ 31-03-2019ರೊಳಗೆ ಸಾಲವನ್ನು ಪಾವತಿಸಿದವರಿಗೆ ಮರುಪಾವತಿ ನೆರವನ್ನು ನೀಡಲಾಗುವುದು ಇದಲ್ಲದೆ "ನೇಕಾರರ ಸಮ್ಮಾನ್ ಯೋಜನೆ" ಎಂಬ ಹೊಸ ಯೋಜನೆಯಡಿಯಲ್ಲಿ ರಾಜ್ಯದಲ್ಲಿರುವ ಅಂದಾಜು 54,000 ಕೈಮಗ್ಗ ನೇಕಾರರಿಗೆ ಪ್ರತಿ ವರ್ಷ ₹2000/- ಅವರ ಬ್ಯಾಂಕ್ ಖಾತೆಗೆ ನೇರವಾಗಿ ಜಮೆ ಮಾಡಲಾಗುವುದು

ಸರ್ಕಾರ ರಾಜ್ಯದಲ್ಲಿರುವ ₹15.80 ಲಕ್ಷ ನೋಂದಾಯಿತ ಕಟ್ಟಡ ಕಾರ್ಮಿಕರಿಗೆ ಸರ್ಕಾರದಿಂದ ₹2000/- ನೆರವನ್ನು ಘೋಷಿಸಿದೆ ಸರ್ಕಾರ ಕಟ್ಟಡ ಕಾರ್ಮಿಕರಿಗೆ ಡಿಬಿಟಿ ಮೂಲಕ ಈಗಾಗಲೇ ಹೆಚ್ಚುವರಿಯಾಗಿ ₹3000 ನೀಡುವುದಾಗಿ ಘೋಷಿಸಿದೆ.



ಶ್ರೀ ಬಿ.ಎಸ್ ಯಡಿಯೂರಪ್ಪ
ಸನ್ಮಾನ್ಯ ಮುಖ್ಯಮಂತ್ರಿಗಳು

**ಆರ್ಥಿಕ ಬಿಕ್ಕಟ್ಟನ್ನು ಪರಿಹರಿಸಿ ಆರ್ಥಿಕತೆಯನ್ನು ಪುನರಾರಂಭಿಸೋಣ**

#KarnatakaFightsCorona



"ನಮ್ಮ ವೈವಿಧ್ಯಮಯ ಸಂಸ್ಕೃತಿ ಮತ್ತು ಸಂಪ್ರದಾಯಗಳನ್ನು ರಕ್ಷಿಸುವುದು ಮತ್ತು ಗೌರವಿಸುವುದು"
- ಇದು ನಮ್ಮ ದೇಶದ ಪ್ರತಿಯೊಬ್ಬ ನಾಗರಿಕನ ಮೂಲಭೂತ ಕರ್ತವ್ಯ.
ಸಂವಿಧಾನದಲ್ಲಿ ಇದನ್ನು ಪ್ರತಿಪಾದಿಸಲಾಗಿದೆ

ಕರ್ನಾಟಕ ವಾರ್ತೆ
ವಾರ್ತಾ ಹಾಗೂ ಸಾರ್ವಜನಿಕ ಸಂಪರ್ಕ ಇಲಾಖೆ